# ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ. ದಂ.ಯವರ ನ್ಯಾಯಾಲಯ, ಕುಂದಾಪುರ

**ಸಿ.ಸಿ ನಂಬ್ರಃ 2119-2018**

ಸರ್ಕಾರದ ಪರವಾಗಿ
ಕುಂದಾಪುರ ಸಂಚಾರ ಠಾಣಾ ಪೊಲೀಸರು --- ಪಿರ್ಯಾದಿದಾರರು

-ಮತ್ತು-

ಭರತೇಶ್ ಪಟಗಾರ್, 30 ವರ್ಷ,
ತಂದೆಃ ಪಟಗಾರ್ ಡಿ. ಎನ್,
ವಾಸಃ ತಾರಿಗುಂಡಿ ಅಂಚೆ,
ಯಡಮೊಗೆ ಗ್ರಾಮ,
ಕುಂದಾಪುರ ತಾಲೂಕು,
ಉಡುಪಿ ಜಿಲ್ಲೆ --- ಆರೋಪಿ

**ಃಆಪಾದನೆಃ**

ಶ್ರೀಮತಿ ನಾಗರತ್ನಮ್ಮ, ಬಿ.ಎ.ಎಲ್., ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ,. ಕುಂದಾಪುರ ಆದ ನಾನು ಆರೋಪಿತರಾದ ನಿಮಗೆ ಈ ಮೂಲಕ ಮಾಡುವ ಆಪಾದನೆ ಏನೆಂದರೆಃ

ದಿ. 15.07.2018 ರಂದು ಸಂಜೆ ಸುಮಾರು 05.20 ಗಂಟೆಗೆ ಆರೋಪಿತರಾದ ನೀವು ನಿಮ್ಮ ಬಾಬ್ತು ಕೆಎ-20-ಬಿ-3040 ನೇ ನಂಬ್ರದ ದುರ್ಗಾಂಬಾ ಮೋಟಾರ್ಸ್ ಬಸ್‌ನ್ನು ಕುಂದಾಪುರ ಕಡೆಯಿಂದ ಸಿದ್ದಾಪುರ ಕಡೆಗೆ ಮಾನವ ಜೀವಕ್ಕೆ ಹಾನಿಯಾಗುವ ರೀತಿಯಲ್ಲಿ ಅತಿವೇಗ ಹಾಗೂ ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದಿದ್ದು ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 279 ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

2. ಮೇಲ್ಕಂಡ ದಿನ, ಸಮಯ ಹಾಗೂ ಸ್ಥಳದಲ್ಲಿ ಆಪಾದಿತರಾದ ನೀವು ನಿಮ್ಮ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಚಲಾಯಿಸಿಕೊಂಡು ಬಂದು ಕುಂದಾಪುರ ತಾಲೂಕು, ಕಾವ್ರಾಡಿ ಗ್ರಾಮದ ನೆಲ್ಲಿಕಟ್ಟೆ ಗಿರಿಜಾ ಟೈಲ್ಸ್ ಪ್ಯಾಕ್ಟರಿಯ ಎದುರುಗಡೆ SH 52 ರಸ್ತೆಯ ಬಲಬದಿಗೆ ಅಂದರೆ ದಕ್ಷಿಣ ಬದಿಗೆ ಚಲಾಯಿಸಿ, ಸಿದ್ದಾಪುರ ಕಡೆಯಿಂದ ಕುಂದಾಪುರ ಕಡೆಗೆ ಕಿರಣ್ ಶೆಟ್ಟಿ ಎಂಬುವವರು ಚಾಲನೆ ಮಾಡಿಕೊಂಡು ಬರುತ್ತಿದ್ದ ಕೆಎ-20-ಎನ್-2213 ನೇ ನಂಬ್ರದ ಸ್ಯಾಂಟ್ರೋ ಕಾರಿಗೆ ಎದುರುಗಡೆಯಿಂದ ಡಿಕ್ಕಿ ಹೊಡೆದ ಪರಿಣಾಮ ಕಿರಣ್ ಶೆಟ್ಟಿ ಹಾಗೂ ಕಾರಿನಲ್ಲಿ ಪ್ರಯಾಣಿಸುತ್ತಿದ್ದ ದೀಕ್ಷಿತ್ ಶೆಟ್ಟಿ ಗಂಭೀರ ಸ್ವರೂಪದ ಗಾಯಗೊಂಡು ಮೃತಪಡಲು ಕಾರಣರಾಗಿದ್ದು ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 304 (ಎ)ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

3. ಮೇಲ್ಕಂಡ ದಿನ, ಸಮಯ ಹಾಗೂ ಸ್ಥಳದಲ್ಲಿ ಆಪಾದಿತರಾದ ನೀವು ನಿಮ್ಮ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಚಲಾಯಿಸಿಕೊಂಡು ಬಂದು ಕೆಎ-20-ಎನ್-2213 ನೇ ನಂಬ್ರದ ಸ್ಯಾಂಟ್ರೋ ಕಾರಿಗೆ ಎದುರುಗಡೆಯಿಂದ ಡಿಕ್ಕಿ ಹೊಡೆದ ಪರಿಣಾಮ ಕಾರಿನಲ್ಲಿ ಪ್ರಯಾಣಿಸುತ್ತಿದ್ದ ಚಾ.ಸಾ 1 ನೇಯವರು ಸಾಮಾನ್ಯ ಸ್ವರೂಪದ ಗಾಯಗೊಳ್ಳಲು ಕಾರಣರಾಗಿದ್ದು ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 338 ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

4. ಮೇಲ್ಕಂಡ ದಿನ, ಸಮಯ ಹಾಗೂ ಸ್ಥಳದಲ್ಲಿ ಆಪಾದಿತರಾದ ನೀವು ನಿಮ್ಮ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಚಲಾಯಿಸಿಕೊಂಡು ಬಂದು, ಕೆಎ-20-ಎನ್-2213 ನೇ ನಂಬ್ರದ ಸ್ಯಾಂಟ್ರೋ ಕಾರಿಗೆ ಎದುರುಗಡೆಯಿಂದ ಡಿಕ್ಕಿ ಹೊಡೆದ ಪರಿಣಾಮ ಕಾರಿನಲ್ಲಿ ಪ್ರಯಾಣಿಸುತ್ತಿದ್ದ ಚಾ.ಸಾ 2 ಮತ್ತು 3 ನೇಯವರು ಗಂಭೀರ ಸ್ವರೂಪದ ಗಾಯಗೊಳ್ಳಲು ಕಾರಣರಾಗಿದ್ದು ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 338 ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

5. ಮೇಲ್ಕಂಡ ದಿನ, ಸಮಯ ಹಾಗೂ ಸ್ಥಳದಲ್ಲಿ ಆಪಾದಿತರಾದ ನೀವು ನಿಮ್ಮ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಚಲಾಯಿಸಿಕೊಂಡು ಬಂದು ಅಪಘಾತ ಪಡೆಸಿ ಗಾಯಾಳುಗಳನ್ನು ಚಿಕಿತ್ಸೆಗೆ ಆಸ್ಪತ್ರೆಗೆ ಕರೆದುಕೊಂಡು ಹೋಗದೇ ಇದ್ದು ಆ ಮೂಲಕ ಕಲಂ 134 (ಎ) ಜೊತೆಗೆ 187 ಐಎಮ್‌ವಿ ರ ರೀತ್ಯಾ ಶಿಕ್ಷಾರ್ಹವಾದ ಅಪರಾಧ ಮಾಡಿರುತ್ತೀರಿ ಎಂದು ನಿಮ್ಮ ವಿರುದ್ಧ ಆಪಾದನೆ ಇರುತ್ತದೆ.

(ಸದರಿ ಆರೋಪಗಳ ಕುರಿತಂತೆ ನೀವು ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗಬೇಕೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ )

ದಿನಾಂಕ ಃ 02.12.2019

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ., ಕುಂದಾಪುರ.

RMS